ಪರೀಕ್ಷಾ ತುರ್ತು

ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ.

**6ನೇ ಅಡ್ಡರಸ್ತೆ. ಮಲ್ಲೇಶ್ವರಂ. ಬೆಂಗಳೂರು – 560003**

************************************************************************************

**ಸಂಖ್ಯೆ : ಪಿ1/ಗ.ಶಾ/ಜೂನ್ 20/ಪ.ಪ್ರ.ಪ/01/2020–21** **ದಿನಾಂಕ : 06.06.2020**

**– ಸುತ್ತೋಲೆ –**

**ವಿಷಯ :** ಕೋವಿಡ್ 19ರ ಹಿನ್ನೆಲೆಯಲ್ಲಿ ಮುಂದೂಡಲಾಗಿದ್ದ ಮಾರ್ಚ್/ಏಪ್ರಿಲ್–2020 ರ ಎಸ್.ಎಸ್.ಎಲ್.ಸಿ ಪರೀಕ್ಷೆಯ ಅಂತಿಮ ಪರಿಷ್ಕೃತ ಪ್ರವೇಶ ಪತ್ರಗಳನ್ನು ಶಾಲಾ ಹಂತದಲ್ಲಿ ಡೌನ್‌ಲೋಡ್ ಮಾಡಿಕೊಳ್ಳುವ ಬಗ್ಗೆ.

**ಉಲ್ಲೇಖ :** ಈ ಕಛೇರಿ ಪತ್ರಸಂಖ್ಯೆ ಎ8/ಮಾರ್ಚ್.20/ಪ್ರ.ಪ.ಸು/39/2019–20 ದಿನಾಂಕ10.02.2020

*****

2019–20ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಗಳನ್ನು ಮಾರ್ಚ್ 27 ರಿಂದ ಏಪ್ರಿಲ್ 09ರವರೆಗೆ ನಡೆಸಲು ಉದ್ದೇಶಿಸಲಾಗಿತ್ತು. ಆದರೆ ಕೋವಿಡ್ 19ರ ಹಿನ್ನೆಲೆಯಲ್ಲಿ ದೇಶಾದ್ಯಂತ ಲಾಕ್‌ಡೌನ್ ಜಾರಿಯಿದ್ದ ಕಾರಣ ಪರೀಕ್ಷೆಗಳನ್ನು ಮುಂದೂಡಲಾಗಿತ್ತು. ಮುಂದೂಡಲಾಗಿದ್ದ ಎಸ್.ಎಸ್.ಎಲ್.ಸಿ ಪರೀಕ್ಷೆಗಳನ್ನು 25.06.2020 ರಿಂದ 04.07.2020ರವರೆಗೆ ನಡೆಸಲು ಉದ್ದೇಶಿಸಲಾಗಿದ್ದು, ಅದರಂತೆ ಪರಿಷ್ಕೃತ ವೇಳಾಪಟ್ಟಿಯನ್ನು ನೀಡಲಾಗಿದೆ.

1. ವೇಳಾಪಟ್ಟಿ ಬದಲಾವಣೆಯಾಗಿರುವುದರಿಂದ ಹಾಗೂ ವಲಸೆ ಕಾರ್ಮಿಕರ ಮಕ್ಕಳು ಮತ್ತು ವಸತಿ ನಿಲಯಗಳಲ್ಲಿ ಇದ್ದು ವ್ಯಾಸಂಗ ಮಾಡಿದ ಹತ್ತನೇ ತರಗತಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಕೇಂದ್ರದ ಬದಲಾವಣೆಗೆ ಅವಕಾಶ ನೀಡಿದ್ದರಿಂದ, ಪರೀಕ್ಷೆಗೆ ಹಾಜರಾಗುತ್ತಿರುವ ಎಲ್ಲಾ CCERF/CCERR/CCEPF/CCEPR/NSR/NSPR ವಿದ್ಯಾರ್ಥಿಗಳ ಪರಿಷ್ಕೃತ ಅಂತಿಮ ಪ್ರವೇಶ ಪತ್ರಗಳನ್ನು ದಿನಾಂಕ 10.06.2020 ರಂದು ಮಂಡಳಿಯ ಜಾಲತಾಣದಲ್ಲಿ ಅಪ್‌ಲೋಡ್ ಮಾಡಲಾಗಿದೆ. ಈ ಹಿಂದೆ ನೀಡಿದ ಪ್ರವೇಶ ಪತ್ರಗಳು ಅಸಿಂಧುವಾಗಿದ್ದು, ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರು ವಿದ್ಯಾರ್ಥಿಗಳ ಪರಿಷ್ಕೃತ ಪ್ರವೇಶ ಪತ್ರಗಳನ್ನು ಮಂಡಳಿಯ ಜಾಲತಾಣದ ಶಾಲಾ ಲಾಗಿನ್‌ನಲ್ಲಿ ಡೌನ್‌ಲೋಡ್ ಮಾಡಿಕೊಂಡು ವಿದ್ಯಾರ್ಥಿಗಳಿಗೆ ವಿತರಿಸಲು ಕ್ರಮವಹಿಸುವುದು.

ClassResult.in

2. ವಲಸೆ ಕಾರ್ಮಿಕರ ಮಕ್ಕಳು ಮತ್ತು ವಸತಿ ನಿಲಯಗಳಲ್ಲಿ ಇದ್ದು ವ್ಯಾಸಂಗ ಮಾಡಿದ ಹತ್ತನೇ ತರಗತಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಕೇಂದ್ರದ ಬದಲಾವಣೆಗೆ ಅವಕಾಶ ನೀಡಿದ್ದು, ಅದರಂತೆ ಶಾಲೆಯಿಂದಲೇ ಆಯ್ಕೆ ಮಾಡಿಕೊಂಡ ಪರೀಕ್ಷಾ ಕೇಂದ್ರಗಳಿಗೆ ಆ ವಿದ್ಯಾರ್ಥಿಗಳನ್ನು ನಿಯೋಜಿಸಲಾಗಿದೆ. ಶಾಲಾ ಮುಖ್ಯ ಶಿಕ್ಷಕರು ಮರುಆಯ್ಕೆ ಮಾಡಿಕೊಂಡ ಪರೀಕ್ಷಾ ಕೇಂದ್ರಕ್ಕೆ ನಿಯೋಜನೆ ಮಾಡಿರುವ ಬಗ್ಗೆ ದೃಢೀಕರಿಸಿಕೊಳ್ಳುವುದು.

3. ವಲಸೆ ಕಾರ್ಮಿಕರ ಮಕ್ಕಳು ಮತ್ತು ವಸತಿ ನಿಲಯಗಳಲ್ಲಿ ಇದ್ದು ವ್ಯಾಸಂಗ ಮಾಡಿದ ಹತ್ತನೇ ತರಗತಿ ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಕೆಳಕಂಡ ಮೂರು ವಿಧಾನದಲ್ಲಿ ಪಡೆಯಬಹುದಾಗಿದೆ.
   - ವ್ಯಾಸಂಗ ಮಾಡಿದ ಶಾಲಾ ಲಾಗಿನ್‌ನಲ್ಲಿ
   - ಮರು ಹಂಚಿಕೆ ಮಾಡಿಕೊಂಡ ಪರೀಕ್ಷಾ ಕೇಂದ್ರದ ಶಾಲಾ ಲಾಗಿನ್‌ನಲ್ಲಿ
   - ಮರು ಹಂಚಿಕೆ ಮಾಡಿಕೊಂಡ ಪರೀಕ್ಷಾ ಕೇಂದ್ರದ ಬ್ಲಾಕ್/ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳ ಲಾಗಿನ್‌ನಲ್ಲಿ.

ವಿದ್ಯಾರ್ಥಿಗಳಿಗೆ ಈ ಬಗ್ಗೆ ಮಾಹಿತಿ ನೀಡಿ ಪ್ರವೇಶ ಪತ್ರ ಪಡೆಯಲು ತಿಳಿಸುವುದು. ಪ್ರತಿ ವಿದ್ಯಾರ್ಥಿಯು ಪ್ರವೇಶ ಪತ್ರಗಳನ್ನು ಪಡೆದಿರುವ ಬಗ್ಗೆ ಮುಖ್ಯ ಶಿಕ್ಷಕರು ದೃಢೀಕರಿಸಿಕೊಳ್ಳುವುದು. ಒಂದು ವೇಳೆ ಮಾಹಿತಿ ಕೊರತೆ ಅಥವಾ ಇತರೆ ಕಾರಣಗಳಿಂದ ವಿದ್ಯಾರ್ಥಿಯು ಪ್ರವೇಶ ಪತ್ರ ಪಡೆಯದಿರುವ ಬಗ್ಗೆ ಮಂಡಳಿಗೆ ದೂರುಗಳು ಬಂದಲ್ಲಿ ಶಾಲಾ ಮುಖ್ಯ ಶಿಕ್ಷಕರೇ ನೇರ ಹೊಣೆಗಾರರಾಗಿರುತ್ತಾರೆ.

6/6/20

(ಸುಮಂಗಲ. ವಿ)

ನಿರ್ದೇಶಕರು, ಪರೀಕ್ಷೆಗಳು

ಅಗತ್ಯ ಕ್ರಮಕ್ಕಾಗಿ :

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ರವರು ಎಲ್ಲಾ ವಿದ್ಯಾರ್ಥಿಗಳಿಗೆ ಶಾಲಾ ಮುಖ್ಯ ಶಿಕ್ಷಕರು ಪ್ರವೇಶ ಪತ್ರ ವಿತರಣೆ ಮಾಡಿರುವ ಬಗ್ಗೆ ಮತ್ತು ತಮ್ಮ ಜಿಲ್ಲೆಗೆ ಬೇರೆ ಜಿಲ್ಲೆಗಳಿಂದ ಪರೀಕ್ಷಾ ಕೇಂದ್ರ ಬದಲಾವಣೆ ಮಾಡಿಕೊಂಡಿರುವ ಎಲ್ಲಾ ವಿದ್ಯಾರ್ಥಿಗಳಿಗೆ ತಮ್ಮ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಪ್ರವೇಶ ಪತ್ರ ವಿತರಣೆ ಮಾಡುವ ಬಗ್ಗೆ ಕ್ರಮವಹಿಸುವುದು.
2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಉಪನಿರ್ದೇಶಕರು (ಆಡಳಿತ) ರವರ ಮುಖೇನ.
3) ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗು ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ ಮಂಡಳಿಯ ಶಾಲಾ ಲಾಗಿನ್ ಮೂಲಕ

ClassResult.in

# HOW TO DOWNLOAD THE ADMISSION TICKET

1. Go to KSEEB Website i.e *kseeb.kar.nic.in*
2. Login with your School Login credentials .
3. Click on **Admission Ticket for APRIL 2020 Exam**.




4. A. Click on **Final Revised Admission Tickets** to download the admission tickets of your school students.

ClassResult.in



B. Admission tickets of Students those who belongs to your school can be downloaded here .




## ADMISSION TICKETS OF IN MIGRANT STUDENTS .

5. A. Click on **In Migrated (Center) Students Admission Ticket** to download the admission tickets of IN MIGRATED students .

ClassResult.in



B. Admission tickets of Students, those who have <u>IN MIGRATED</u> from other schools to your center can be downloaded here ..




6. A. Click on **Revised Individual Admission Tickets** to download the individual student's admission ticket your school only .




ClassResult.in

B. Click on check box **Registration No/SATS/Ref No Student No**, enter the Registration No/SATS/Ref No Student No, .

Click on **VIEW** button to fetch the information and click on **Print Admission ticket** to download the particular student's Admission Ticket.

